ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ವೃತ್ತಿಪರ ಕೋರ್ಸ್‌ಗಳಿಗೆ ಆನ್‌ಲೈನ್ ಪರೀಕ್ಷೆ ನಡೆಸುವ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

972 (1195) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಇಂಜಿನಿಯರಿಂಗ್ ಸೇರಿದಂತೆ ಇನ್ನಿತರ ವೃತ್ತಿಪರ ಕೋರ್ಸ್‌ಗಳಿಗೆ ಪ್ರವೇಶ ಕಲ್ಪಿಸುವ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಯನ್ನು 2020ರಲ್ಲಿ ಆನ್‌ಲೈನ್‌ನಲ್ಲಿ ನಡೆಸುವ ಕುರಿತು ಸರ್ಕಾರದ ತೀರ್ಮಾನವೇನು ;

(ಆ) ಆನ್‌ಲೈನ್‌ನಲ್ಲಿ ಪರೀಕ್ಷೆ ನಡೆಸುವ ಕುರಿತು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಸೂಚನೆ ನೀಡಲಾಗಿದೆಯೇ ;

(ಇ) ಆನ್‌ಲೈನ್ ಪರೀಕ್ಷೆ ಕುರಿತು ನಗರ ಹಾಗೂ ಗ್ರಾಮೀಣ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗಿದೆಯೇ ?